ಅ) ನೈಜ ಬಡತನ ರೇಖೆಗಿಂತ ಕೆಳಗಿನ ಕುಟುಂಬಗಳನ್ನು ಗುರುತಿಸಲು ಮನೆ ಮನೆ ಭೇಟಿ ನೀಡಿ ಅರ್ಹ ಫಲಾನುಭವಿಗಳನ್ನು ಗುರುತಿಸುವ ಸಮೀಕ್ಷೆ ಕಾರ್ಯವನ್ನು ವ್ಯವಸ್ಥೆ ಮಾಡಲಾಗಿದೆ.

ಸಂಬಂಧಿಸಿದ ಗ್ರಾಮ ಲೆಕ್ಕಿಗರು ಹಾಗೂ ಪಂಚಾಯತ್ ಕಾರ್ಯದರ್ಶಿಗಳು ಸಂಯೋಜಿತವಾಗಿ ಮನೆ ಮನೆಗೆ ಭೇಟಿ ನೀಡಿ ಸಮೀಕ್ಷೆ ನಡೆಸುವರು. ಸಮೀಕ್ಷೆ ಪ್ರಾರಂಭವಾಗಿರುತ್ತದೆ ಮತ್ತು ಪ್ರಗತಿಯಲ್ಲಿದೆ.

ಸಿಂಧನೂರು ತಾಲ್ಲೂಕು ನೀರಾವರಿ ಇಲಾಖೆಯಲ್ಲಿನ ಖಾಲಿ ಹುದ್ದೆಗಳು

1409 (1853) - ಶ್ರೀ ಹಂಪನಗೌಡ ಬಾದರ್ಲಿ (ಸಿಂಧನೂರು): ಮಾನ್ಯ ಜಲ ಸಂಪನ್ಮೂಲ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಸಿಂಧನೂರು ತಾಲ್ಲೂಕು ನೀರಾವರಿ ಇಲಾಖೆಯಲ್ಲಿ ಖಾಲಿಯಿರುವ ಹುದ್ದೆಗಳ ಸಂಖ್ಯೆ ಎಷ್ಟು? ಅವುಗಳನ್ನು ಯಾವಾಗ ಭರ್ತಿ ಮಾಡಲಾಗುವುದು;

ಆ) ಸಿಂಧನೂರು ತಾಲ್ಲೂಕಿನಲ್ಲಿ ಎಷ್ಟು ನೀರು ಬಳಕೆದಾರರ ಸಹಕಾರಿ ಸಂಘಗಳು ರಚನೆಯಾಗಿವೆ: ಹಾಗೂ ಎಷ್ಟು ಸಂಘಗಳು ಕಾರ್ಯ ಚಟುವಟಿಕೆಯಲ್ಲಿ ತೊಡಗಿವೆ? (ವಿವರ ಒದಗಿಸುವುದು)

ಶ್ರೀ ಹೆಚ್.ಕೆ. ಪಾಟೀಲ್ (ಜಲ ಸಂಪನ್ಮೂಲ ಸಚಿವರು):

ಅ) ಜಲ ಸಂಪನ್ಮೂಲ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಕಛೇರಿಗಳು ಭೌಗೋಳಿಕವಾಗಿ ಜಿಲ್ಲಾವಾರು ಅಥವಾ ತಾಲ್ಲೂಕುವಾರು ಇರುವುದಿಲ್ಲ. ನೀರಾವರಿ ಯೋಜನೆಗಳು ನಡೆಯುತ್ತಿರುವ ಸ್ಥಳಗಳಲ್ಲಿ ಕಛೇರಿಗಳ ಕೇಂದ್ರ ಸ್ಥಾನಗಳು ಇರುತ್ತವೆ. ನೀರಾವರಿ ಯೋಜನೆಗಳು ನಡೆಯುತ್ತಿರುವ ಸಿಂಧನೂರು ವಿಭಾಗದ ವ್ಯಾಪ್ತಿಯಲ್ಲಿ ಕೆಲವು ಉಪ ವಿಭಾಗ ಕಛೇರಿಗಳಿದ್ದು, ಆ ಕಛೇರಿಗಳಲ್ಲಿ 33 ವಿವಿಧ ವೃಂದದ ಹುದ್ದೆಗಳು ಖಾಲಿ ಇರುತ್ತವೆ.

ಭರ್ತಿ ಮಾಡಲು ಅಗತ್ಯ ಕ್ರಮಗಳ ಪ್ರಕ್ರಿಯೆ ಪ್ರಾರಂಭಿಸಲಾಗಿದೆ.

ಆ) ಇದುವರೆಗೆ 24 ನೀರು ಬಳಕೆದಾರರ ಸಂಘಗಳನ್ನು ಸಿಂಧನೂರು ತಾಲ್ಲೂಕಿನಲ್ಲಿ ನೊಂದಾಯಿಸಲಾಗಿದೆ. ಇದುವರೆಗೆ ಮೇಲಿನ ಯಾವುದು ಸಂಘಗಳು ಕಾರ್ಯ ಚಟುವಟಿಕೆಗಳನ್ನು ಕೈಗೆತ್ತಿಕೊಂಡಿಲ್ಲ ಹಾಗೂ ನೀರು ನಿರ್ವಹಣೆ ಜವಾಬ್ದಾರಿಯನ್ನು ವಹಿಸಿಕೊಂಡಿಲ್ಲ.

ಸಿಂಧನೂರು ತಾಲ್ಲೂಕಿನ ಏತ ನೀರಾವರಿ ಯೋಜನೆ

1410 (1854) - ಶ್ರೀ ಹಂಪನಗೌಡ ಬಾದರ್ಲಿ (ಸಿಂಧನೂರು): ಮಾನ್ಯ ಜಲ ಸಂಪನ್ಮೂಲ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸಿಂಧನೂರು ಕ್ಷೇತ್ರದ ಸಾಲಗುಂದ ಗ್ರಾಮದ ಏತ ನೀರಾವರಿ ಯೋಜನೆ ಯಾವ ಹಂತದಲ್ಲಿದೆ; ಈ ಯೋಜನೆ ಮಂಜೂರು ಮಾಡುವ ಉದ್ದೇಶ ಸರ್ಕಾರಕ್ಕಿದೆಯೇ; ಅಂದಾಜು ವೆಚ್ಚ ಎಷ್ಟು? (ವಿವರ ಒದಗಿಸುವುದು)

ಶ್ರೀ ಎಸ್. ಕುಮಾರ್ ಬಂಗಾರಪ್ಪ (ಜಲ ಸಂಪನ್ಮೂಲ ರಾಜ್ಯ ಸಚಿವರು):

ಅ) ಕುಷ್ಟಗಿ ಸಣ್ಣ ನೀರಾವರಿ ವಿಭಾಗದ ವ್ಯಾಪ್ತಿಯಲ್ಲಿ ಬರುವ ಸಿಂಧನೂರು ಕ್ಷೇತ್ರದ ಸಾಲಗುಂದ ಏತ ನೀರಾವರಿ ಯೋಜನೆ ನಿರ್ಮಾಣದ ಕಾಮಗಾರಿಯನ್ನು 2002-03 ನೇ ಸಾಲಿನ ಸಣ್ಣ ನೀರಾವರಿ ಆಯವ್ಯಯದಲ್ಲಿ ಅಳವಡಿಸಲು ಉದ್ದೇಶಿಸಲಾಗಿದೆ. ಈ ಕಾಮಗಾರಿಯ ನಿರ್ಮಾಣದ ಅಂದಾಜು ವೆಚ್ಚ 200-00 ಲಕ್ಷ ಇರುತ್ತದೆ. ಅವಶ್ಯವಿರುವ ಅನುದಾನದ ಲಭ್ಯತೆ ಮೇರೆಗೆ ಕಾಮಗಾರಿಯನ್ನ ಕೈಗೆತ್ತಿಕೊಳ್ಳಲಾಗುವುದು.

ಸಿಂಧನೂರು ತಾಲ್ಲೂಕಿನ ಉಪ ಕಾಲುವೆಗಳ ದುರಸ್ಥಿ

1411 (1855) - ಶ್ರೀ ಹಂಪನಗೌಡ ಬಾದರ್ಲಿ(ಸಿಂಧನೂರು): ಮಾನ್ಯ ಜಲ ಸಂಪನ್ಮೂಲ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸಿಂಧನೂರು ತಾಲ್ಲೂಕ ವ್ಯಾಪ್ತಿಯಲ್ಲಿನ ತುಂಗಭದ್ರ ಎಡದಂಡೆಯ 36, 40, 54, 55 ರ ಉಪಕಾಲುವೆಗಳು ದುಸ್ಥಿತಿಯಲ್ಲಿದ್ದು, ಅವುಗಳನ್ನು ದುರಸ್ತಿ ಮಾಡುವ ಉದ್ದೇಶ ಸರ್ಕಾರಕ್ಕೆ ಇದೆಯೇ?

ಶ್ರೀ ಹೆಚ್.ಕೆ. ಪಾಟೀಲ್ (ಜಲ ಸಂಪನ್ಮೂಲ ಸಚಿವರು):

ಅ) ಇದೆ. ದುರಸ್ಥಿಯ ಅಂದಾಜು ತಯಾರಿಸಲು ಕ್ರಮ ಜರುಗಿಸಲಾಗಿದೆ. ಇದರ ವಿವರಗಳು ಹೀಗಿವೆ:

ಕ್ರಮ ಸಂಖ್ಯೆ	ವಿತರಣಾ ಕಾಲುವೆ	ಅಂದಾಜು ಮೊತ್ತ ರೂ. ಲಕ್ಷಗಳಲ್ಲಿ
1.	36	1852.00
2.	40	888.00
3.	54	2474.00
4.	55	1164.00
	ಒಟ್ಟು ರೂ.	6378.00

Yes. Action is taken to prepare the Estimates for repair works. The details are as hereunder:-

Sl. No.	Distributory	Estimated cost in Rs. Lakhs
1.	36	1852.00
2.	40	888.00
3.	54	2474.00
4.	55	1164.00
	Total Rs.	6378.00